
ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತ SAMYUKTA KARNATAKA
ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ

# ಪ್ರತಿಭಟನೆ ಸಂಖ್ಯೆ ಇಳಿಮುಖಕ್ಕೆ ಸಲಹೆ

ಹುಬ್ಬಳ್ಳಿ: ಬೆಳಗಾವಿ ಅಧಿವೇಶನದ ಅತ್ಯಮೂಲ್ಯವಾದ ಸಮಯ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ನಡೆಯುವಂತಾಗಲು ಗಮನಹರಿಸಬೇಕು. ಪ್ರತಿಭಟನೆಗಳ ಸಂಖ್ಯೆ ಇಳಿಮುಖಗೊಳಿಸಿ ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸರ್ಕಾರಕ್ಕೆ ಅರ್ಥಪೂರ್ಣವಾದ ಸಲಹೆ ನೀಡಿದ್ದಾರೆ.



ಡಿ. 4ರಿಂದ ಸುವರ್ಣ ಸೌಧದಲ್ಲಿ ಅಧಿವೇಶನ

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4 ರಿಂದ 15ರವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಅವರು ಸರ್ಕಾರಕ್ಕೆ ಪತ್ರ ಬರೆದು ಕೆಲ ಸಲಹೆ–ಸೂಚನೆ ನೀಡಿದ್ದಾರೆ.

ವಿವಿಧ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಪತ್ರದಲ್ಲಿ ಸಭಾಪತಿ ಹೇಳಿದ್ದಾರೆ.

# ಬೆಳಗಾವಿ ಅಧಿವೇಶನ: ಪ್ರತಿಭಟನೆಗಳ ಇಳಿಮುಖಕ್ಕೆ

# ಮುಖ್ಯಮಂತ್ರಿಗೆ, ಸಭಾಪತಿ ಬಸವರಾಜ ಹೊರಟ್ಟಿ ಸಲಹಾ ಪತ್ರ

**ಸಂಜೆ ಎಕ್ಸ್‌ಪ್ರೆಸ್ ಸುದ್ದಿ, ಬೆಂಗಳೂರು, ನ 21:** ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4, 2023 ರಿಂದ ಡಿಸೆಂಬರ್ 15ರವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನವನ್ನು ರಾಜ್ಯ ಸರ್ಕಾರ ನಡೆಸಲು ನಿರ್ಧರಿಸಿರುವ ಹಿನ್ನೆಲೆ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದು, ಅಧಿವೇಶನದ ಅತ್ಯಮೂಲ್ಯವಾದ ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ



ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ.

ಪತ್ರದಲ್ಲಿ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್.ಹೊರಟ್ಟಿ ಅವರು ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ

→ 2

# ಧರಣಿ–ಸತ್ಯಾಗ್ರಹ ತಡೆಗೆ ಕ್ರಮ : ಸರ್ಕಾರಕ್ಕೆ ಸಭಾಪತಿ ಹೊರಟ್ಟಿ ಪತ್ರ

**ಬೆಂಗಳೂರು, ನ. 21:** ಬೆಳಗಾವಿಯಲ್ಲಿ ಡಿ. 4 ರಂದು ಆರಂಭವಾಗಲಿರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ, ಸತ್ಯಾಗ್ರಹಗಳನ್ನು ಇಳಿಮುಖ ಮಾಡಲು ಸೂಕ್ತಕ್ರಮ ಕೈಗೊಳ್ಳುವಂತೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಬೆಳಗಾವಿಯ ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆ, ಸತ್ಯಾಗ್ರಹ, ಧರಣಿ ನಡೆಯುತ್ತಿವೆ. ಇದರಿಂದ ಅಧಿವೇಶನದ ಅತ್ಯಮೂಲ್ಯವಾದ ಸಮಯ ವ್ಯರ್ಥವಾಗುತ್ತಿದೆ. ಹಾಗಾಗಿ ಅಧಿವೇಶನವನ್ನು ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸುವಂತೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ, ಕೃಷಿಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ



ಕೃಷ್ಣಬೈರೇಗೌಡ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಪತ್ರ ಬರೆದಿದ್ದಾರೆ. ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಕೃಷಿ, ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಹಾಗೂ

**ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಚರ್ಚೆಗಳು ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕದ ಭಾಗದಲ್ಲಿ ಅಧಿವೇಶನ ಸಾರ್ಥಕವಾಗಿ ನಡೆದು ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಪತ್ರದಲ್ಲಿ ತಿಳಿಸಿದ್ದಾರೆ.**

ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ–ಸತ್ಯಾಗ್ರಹ ನಡೆಸಲು ಮುಂದಾಗಿದ್ದು, ಈ ಹಿನ್ನೆಲೆಯಲ್ಲಿ ಅಧಿವೇಶನ ಆರಂಭವಾಗುವ ಮುನ್ನವೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಸತ್ಯಾಗ್ರಹ ನಡೆಸದಂತೆ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಪತ್ರದಲ್ಲಿ ಕೋರಿದ್ದಾರೆ.

ಪ್ರತಿಭಟನೆ ನಡೆಸುವ ಸಂಘಟನೆಗಳ ಜತೆ ಸಂಬಂಧಪಟ್ಟ ಸಚಿವರು ಮಾತನಾಡಿ ಪ್ರತಿಭಟನೆ ಆಗದಂತೆ ನೋಡಿಕೊಂಡರೆ ಅಧಿವೇಶನ ಅರ್ಥಪೂರ್ಣವಾಗಿ ನಡೆಯುವಂತಾಗುತ್ತದೆ ಎಂದು ಅವರು ಹೇಳಿದ್ದಾರೆ.

ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕದ ಭಾಗದಲ್ಲಿ ಅಧಿವೇಶನ ಸಾರ್ಥಕವಾಗಿ ನಡೆದು ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಪತ್ರದಲ್ಲಿ ತಿಳಿಸಿದ್ದಾರೆ.

## ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸರ್ಕಾರಕ್ಕೆ ಪತ್ರ

# ಬೆಳಗಾವಿ ಅಧಿವೇಶನದಲ್ಲಿ ಪ್ರತಿಭಟನೆ ಇಳಿಮುಖ ಮಾಡಿ

• ಸುದ್ದಿಮೂಲ ವಾರ್ತೆ ಬೆಂಗಳೂರು, ನ.21: ಬೆಳಗಾವಿಯಲ್ಲಿ ಡಿ.4 ರಿಂದ ಆರಂಭವಾಗಲಿರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ, ಸತ್ಯಾಗ್ರಹಗಳನ್ನು ಇಳಿಮುಖ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.

ಬೆಳಗಾವಿಯ ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳು ನಡೆಯುತ್ತಿವೆ. ಇದರಿಂದ ಅಧಿವೇಶನದ ಅತ್ಯಮೂಲ್ಯವಾದ ಸಮಯ ವ್ಯರ್ಥವಾಗುತ್ತಿದೆ. ಹಾಗಾಗಿ ಅಧಿವೇಶನವನ್ನು ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸುವಂತೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಪತ್ರ ಬರೆದಿದ್ದಾರೆ.



ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರ ಗಡೆ ಕೃಷಿ, ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಹಾಗೂ ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ ಸತ್ಯಾಗ್ರಹ ನಡೆಸಲು ಮುಂದಾಗಿದ್ದು,

ಈ ಹಿನ್ನೆಲೆಯಲ್ಲಿ ಅಧಿವೇಶನ ಆರಂಭವಾಗುವ ಮುನ್ನವೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಸತ್ಯಾಗ್ರಹ ನಡೆಸದಂತೆ

• 6ನೇ ಪುಟಕ್ಕೆ

ಸಂಜೆ ಸಮಾಚಾರ್

www.sanjesamachar.com
21 Nov 2023 - Page 3

# ಬೆಳಗಾವಿ ಅಧಿವೇಶನ: ಪ್ರತಿಭಟನೆಗಳ ಇಳಿಮುಖಕ್ಕೆ ಮುಖ್ಯಮಂತ್ರಿಗೆ, ಸಭಾಪತಿ ಬಸವರಾಜ ಹೊರಟ್ಟಿ ಸಲಹಾ ಪತ್ರ

**ಬೆಂಗಳೂರು** : ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4, 2023 ರಿಂದ ಡಿಸೆಂಬರ್ 15ರ ವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನವನ್ನು ರಾಜ್ಯ ಸರ್ಕಾರ ನಡೆಸಲು ನಿರ್ಧರಿಸಿರುವ ಹಿನ್ನೆಲೆ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದು, ಅಧಿವೇಶನದ ಅತ್ಯಮೂಲ್ಯವಾದ ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ.

ಪತ್ರದಲ್ಲಿ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್.ಹೊರಟ್ಟಿ ಅವರು ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕೋರಿದ್ದಾರೆ.ಬೆಳಗಾವಿಯ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಹಾಗೂ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು, ಸಾರ್ಥಕವಾಗಿ ಸರ್ಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎಂದು ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಪತ್ರದ ಮೂಲಕ ಕೋರಿದ್ದಾರೆ ಎಂದು ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್ ಹೊರಟ್ಟಿ ಅವರು ಪತ್ರದಲ್ಲಿ ಸಲಹೆ ನೀಡಿರುತ್ತಾರೆ ಎಂದು ಸಭಾಪತಿಯವರ ಕಚೇರಿ ಪ್ರಕಟಣೆ ತಿಳಿಸಿದೆ.

# ಪ್ರತಿಭಟನೆ ಸಂಖ್ಯೆ ಇಳಿಮುಖಕ್ಕೆ ಸಲಹೆ

ಹುಬ್ಬಳ್ಳಿ: ಬೆಳಗಾವಿ ಅಧಿವೇಶನದ ಅತ್ಯಮೂಲ್ಯವಾದ ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ನಡೆಯುವಂತಾಗಲು ಗಮನಹರಿಸಬೇಕು. ಪ್ರತಿಭಟನೆಗಳ ಸಂಖ್ಯೆ ಇಳಿಮುಖಗೊಳಿಸಿ ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸರ್ಕಾರಕ್ಕೆ ಅರ್ಥಪೂರ್ಣವಾದ ಸಲಹೆ ನೀಡಿದ್ದಾರೆ.



**ಡಿ. 4ರಿಂದ ಸುವರ್ಣ ಸೌಧದಲ್ಲಿ ಅಧಿವೇಶನ**

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4 ರಿಂದ 15ರವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಅವರು ಸರ್ಕಾರಕ್ಕೆ ಪತ್ರ ಬರೆದು ಕೆಲ ಸಲಹೆ-ಸೂಚನೆ ನೀಡಿದ್ದಾರೆ.

ವಿವಿಧ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಪತ್ರದಲ್ಲಿ ಸಭಾಪತಿ ಹೇಳಿದ್ದಾರೆ.

## ಬೆಳಗಾವಿ ಅಧಿವೇಶನ

# ಪ್ರತಿಭಟನೆಗಳ ಸಂಖ್ಯೆ ಇಳಿಮುಖಕ್ಕೆ ಶೀಘ್ರವೇ ಪರಿಹಾರ ಚರ್ಚಿಸಿ: ಬಸವರಾಜ ಹೊರಟ್ಟಿ

**ಹುಬ್ಬಳ್ಳಿ:** ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4, 2023 ರಿಂದ ಡಿಸೆಂಬರ್ 15ರ ವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನವನ್ನು ರಾಜ್ಯ ಸರ್ಕಾರ ನಡೆಸಲು ನಿರ್ಧರಿಸಿರುವ ಹಿನ್ನೆಲೆ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದು, ಅಧಿವೇಶನದ ಅತ್ಯಮೂಲ್ಯವಾದ ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರ ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ.



ಪತ್ರದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್.ಹೊರಟ್ಟಿ ಅವರು ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸದರಿ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕೋರಿದ್ದಾರೆ.

ಬೆಳಗಾವಿಯ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಹಾಗೂ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು, ಸಾರ್ಥಕವಾಗಿ ಸರ್ಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಪತ್ರದ ಮೂಲಕ ಕೋರಿದ್ದಾರೆ.

# ಬೆಳಗಾವಿ ಚಳಿಗಾಲ ಅಧಿವೇಶನ ವ್ಯವಸ್ಥಿತ ,ಅರ್ಥಪೂರ್ಣವಾಗಿ ನಡೆಸಲು ಹೊರಟ್ಟಿ ಸಲಹೆ



ಹುಬ್ಬಳ್ಳಿ : ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿ. 4 ರಿಂದ 15ರವರೆಗೆ ನಡೆಯುವ ಚಳಿಗಾಲದ ಅಧಿವೇಶನದಲ್ಲಿ ಅತ್ಯಮೂಲ್ಯವಾದ ಸಮಯು ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಗೆ ವ್ಯರ್ಥವಾಗುತ್ತಿದೆ ಎಂದು ಹಲವರ ಅಭಿಪ್ರಾಯ ವ್ಯಕ್ತಪಡಿಸಿದ್ದು, ಈ ಹಿನ್ನೆಲೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸಲು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಸಲಹೆ ನೀಡಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಸೇರಿದಂತೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದಿರುವ ಹೊರಟ್ಟಿ ಅವರು, ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದ್ದು, ಈ ಹಿನ್ನಲೆಯಲ್ಲಿ ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಿ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸದರಿ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ತಿಳಿಸಿದ್ದಾರೆ.

ಬೆಳಗಾವಿಯ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಹಾಗೂ ಸದನದ ಒಳಗಡೆ ಜನಸಾಮಾನ್ಯರ ಹಾಗೂ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆದು ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು, ಸಾರ್ಥಕವಾಗಿ ಸರ್ಕಾರಕ್ಕೆ ಗೌರವ ಹಾಗೂ ಒಳ್ಳೆಯ ಹೆಸರು ಬರುತ್ತದೆ ಎಂದು ಹೊರಟ್ಟಿ ಅವರು ಪತ್ರದ ಮೂಲಕ ಕೋರಿದ್ದಾರೆ .